# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ  E-mail : kannadapostnews@gmail.com  / ಕನ್ನಡ post  Price: ₹1

Vol.No.02 | Issue. 103 | Pages. 2 | Date: 25-03-2026, WEDNESDAY  RNI NO: KARKAN/2024/89601  Kannada Daily

ಸಂಪುಟ : 02 – ಸಂಚಿಕೆ : 103 – ಪುಟಗಳು : 2  25-03-2026  ಬುಧವಾರ  Ph: 8762954248  ದರ : ₹1


# ಜಿಲ್ಲೆಯ ವಿವಿಧೆಡೆ ಪ್ರತ್ಯೇಕ ಅಪಘಾತ ನಾಲ್ವರ ಸಾವು-ಹಲವರಿಗೆ ಗಾಯ

## ಹಿರೀಸಾವೆ ಬಳಿ ಲಾರಿಗೆ ಖಾಸಗಿ ಬಸ್ ಡಿಕ್ಕಿ | ಬಾಳ್ಳುಪೇಟೆಯಲ್ಲಿ ಪಾದಚಾರಿಗೆ ಗುದ್ದಿದ ಕಾರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ವಿವಿಧೆಡೆ ಮಂಗಳವಾರ ಸಂಭವಿಸಿದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ನಾಲ್ವರು ಮೃತಪಟ್ಟು 25ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ.

ಲಾರಿ ಓವರ್‌ಟೇಕ್ ಮಾಡಲು ಖಾಸಗಿ ಬಸ್ (ದುರ್ಗಾಂಬ ಮೋಟಾರ್ಸ್) ಚಾಲಕ ವೇಗವಾಗಿ ಓಡಿಸಿದ್ದರಿಂದ ಮುಂದೆ ಹೊರಟಿದ್ದ ಲಾರಿಗೆ ಡಿಕ್ಕಿಯಾಗಿ ಇಬ್ಬರು ಮೃತಪಟ್ಟು 20 ಜನರು ಗಾಯಗೊಂಡಿರುವ ಘಟನೆ ಮಂಗಳವಾರ ತಾಲ್ಲೂಕಿನ ಹಿರೀಸಾವೆ ಸಮೀಪ ರಾಷ್ಟ್ರೀಯ ಹೆದ್ದಾರಿ 75ರ ಅಮ್ಮ ಕುಟೀರ ಬಳಿ ನಡೆದಿದೆ.

ಕುಂದಾಪುರ ಮೂಲದ ಕೃಷ್ಣ ಶೆಟ್ಟಿ (42) ಹಾಗೂ ಹಾಸನದ ಎಸ್.ಎಂ.ಕೃಷ್ಣ ಬಡಾವಣೆ ನಿವಾಸಿ ಮದನ್ (30) ಮೃತರು. ಗಾಯಾಳುಗಳನ್ನು ಬೆಳ್ಳೂರು ಕ್ರಾಸ್‌ನ ಬಿಜಿಎಸ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಮಂಗಳೂರಿನಿಂದ ಬೆಂಗಳೂರಿಗೆ ಹೊರಟಿದ್ದ ಬಸ್ ಬೆಳಿಗ್ಗೆ 4.40ರ ಸಮಯದಲ್ಲಿ ಹಿರೀಸಾವೆ ಸಮೀಪ ಹೋಗುತ್ತಿದ್ದಾಗ ಮುಂದೆ ಹೊರಟಿದ್ದ ಲಾರಿಯನ್ನು ಓವರ್‌ಟೇಕ್ ಮಾಡಲು ಚಾಲಕ ಜೋರಾಗಿ ಓಡಿಸಿದ್ದಾನೆ. ಅಪಘಾತದ ರಭಸಕ್ಕೆ ಬಸ್‌ನ ಮುಂಭಾಗ ಸಂಪೂರ್ಣ ಜಖಂಗೊಂಡಿದೆ. ಕೃಷ್ಣಶೆಟ್ಟಿ ಅವರು ಘಟನಾ ಸ್ಥಳದಲ್ಲೇ ಮೃತಪಟ್ಟರೆ, ಮದನ್ ಅವರು ಆಸ್ಪತ್ರೆಯಲ್ಲಿ ಅಸುನೀಗಿದ್ದಾರೆ.

ಅಪಘಾತದಿಂದ ಕೆಲ ಹೊತ್ತು ಸಂಚಾರದಲ್ಲಿ ವ್ಯತ್ಯಯವುಂಟಾಯಿತು. ಹಿರೀಸಾವೆ ಪೊಲೀಸರು ಸ್ಥಳಕ್ಕಾಗಮಿಸಿ ಬೇರೆ ವಾಹನಗಳ ಓಡಾಟಕ್ಕೆ ಅನುವು ಮಾಡಿಕೊಟ್ಟರು. ಈ ಸಂಬಂಧ ಪ್ರಕರಣ ದಾಖಲಾಗಿದೆ.




### ಪತ್ನಿ ಸಾವು–ಪತಿಗೆ ಗಾಯ

ಕಾರು ಡಿಕ್ಕಿಯಾಗಿ ಬೈಕ್ ಹಿಂಬದಿ ಕುಳಿತಿದ್ದ ಮಹಿಳೆ ಮೃತಪಟ್ಟು ಅವರ ಪತಿ ಗಂಭೀರ ಗಾಯಗೊಂಡಿರುವ ಘಟನೆ ಅರಕಲಗೂಡು ಪಟ್ಟಣದಲ್ಲಿ ನಡೆದಿದೆ.

ವಿನಾಯಕ ನಗರದ ಪುಷ್ಪ ಮೃತರು. ಪತಿ ಶಿವಪ್ಪ ಅವರು ಗಾಯಗೊಂಡಿದ್ದಾರೆ. ದಂಪತಿಗಳಿಬ್ಬರು ಸೋಮವಾರ ದೇವಸ್ಥಾನಕ್ಕೆಂದು ಹೋಗಿದ್ದರು. ಬೈಕ್‌ಗೆ ಪೆಟ್ರೋಲ್ ಹಾಕಿಸುವುದಕ್ಕಾಗಿ ರಸ್ತೆ ದಾಟುತ್ತಿದ್ದಾಗ ಗೊರೂರು ಕಡೆಯಿಂದ ವೇಗವಾಗಿ ಬಂದ ಕಾರು ಚಾಲಕ ಡಿಕ್ಕಿ ಮಾಡಿದ್ದಾನೆ.



ಇಬ್ಬರನ್ನೂ ತಕ್ಷಣವೇ ಆಸ್ಪತ್ರೆಗೆ ದಾಖಲಿಸಲಾಯಿತಾದರೂ ತೀವ್ರ ರಕ್ತಸ್ರಾವ ಹಾಗು ಗಂಭೀರ ಪೆಟ್ಟು ಬಿದ್ದ ಹಿನ್ನಲೆ ಪುಷ್ಪ ಮೃತಪಟ್ಟಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಸ್ವಿಫ್ಟ್ ಕಾರು ಹಾಗೂ ಓಮಿನಿ ನಡುವೆ ಸಂಭವಿಸಿದ ಅಪಘಾತದಲ್ಲಿ ಓಮಿನಿ ಕಾರಿನಲ್ಲಿದ್ದ ವ್ಯಕ್ತಿ ಮೃತಪಟ್ಟಿರುವ ಘಟನೆ ಆಲೂರು ತಾಲ್ಲೂಕಿನ ಮಾವನೂರು ಕೆರೆ ಬಳಿ ಮಂಗಳವಾರ ನಡೆದಿದೆ.

ಹಾಸನದ ರಂಗೋಲಿ ಹಳ್ಳದ ನಿವಾಸಿ ಅನೂಪ್ (34) ಮೃತರು. ಸ್ವಿಫ್ಟ್ ಕಾರಿನಲ್ಲಿದ್ದ ಕೊಡ್ಲಿಪೇಟೆಯ ಇಮ್ರಾನ್ ಹಾಗೂ ಪುತ್ರಿ ಅಬೀಬಾ ಎಂಬುವವರು ಗಂಭೀರ ಗಾಯಗೊಂಡಿದ್ದಾರೆ.

ಆಲೂರು ಕಡೆಯಿಂದ ಹಾಸನಕ್ಕೆ ಬರುತ್ತಿದ್ದ ಓಮಿನಿ ಕಾರಿಗೆ ಎದುರುಗಡೆಯಿಂದ ಬಂದ ಸ್ವಿಫ್ಟ್ ಕಾರು ಡಿಕ್ಕಿಯಾಗಿದೆ. ಅಪಘಾತದ ರಭಸಕ್ಕೆ ಎರಡೂ ಕಾರುಗಳು ಸಂಪೂರ್ಣ ಜಖಂಗೊಂಡಿವೆ. ಆಲೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಪಾದಚಾರಿಗೆ ಡಿಕ್ಕಿಯಾದ ಕಾರು

ಸಕಲೇಶಪುರ: ತಾಲೂಕಿನ ಬಾಳ್ಳುಪೇಟೆಯ ರಾಷ್ಟ್ರೀಯ ಹೆದ್ದಾರಿ 75ರಲ್ಲಿ ರಸ್ತೆ ದಾಟುತ್ತಿದ್ದ ಯುವಕನಿಗೆ ವೇಗವಾಗಿ ಬಂದ ಕಾರು ಡಿಕ್ಕಿ ಹೊಡೆದ ಪರಿಣಾಮ ಯುವಕ ಗಂಭೀರ ಗಾಯಗೊಂಡಿರುವ ಘಟನೆ ನಡೆದಿದೆ.

ಗಾಯಗೊಂಡ ಯುವಕನನ್ನು ದಿನೇಶ್ ಕುಮಾರ್ ಎಂದು ಗುರುತಿಸಲಾಗಿದೆ. ಬಾಳ್ಳುಪೇಟೆ ಬಳಿ ರಸ್ತೆ ದಾಟುತ್ತಿದ್ದ ಸಂದರ್ಭದಲ್ಲಿ ಈ ಘಟನೆ ನಡೆದಿದ್ದು, ಡಿಕ್ಕಿಯ ರಭಸಕ್ಕೆ ಯುವಕ ಸುಮಾರು 20 ಅಡಿ ದೂರಕ್ಕೆ ಹಾರಿ ಬಿದ್ದಿದ್ದಾನೆ.

ಅಪಘಾತಕ್ಕೀಡಾದ ಕಾರು ಬೆಂಗಳೂರು ಮೂಲದಾಗಿದೆ ಕಾರಿನಲ್ಲಿ ವಕೀಲರ ಕುಟುಂಬವು ಬೆಂಗಳೂರಿನಿಂದ ಕುಂದಾಪುರದ ದೇವಸ್ಥಾನಕ್ಕೆ ತೆರಳುತ್ತಿದ್ದಾಗ ಈ ದುರ್ಘಟನೆ ಸಂಭವಿಸಿದೆ. ಅಪಘಾತದ ದೃಶ್ಯವು ಸಮೀಪದ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಡಿಕ್ಕಿಯ ತೀವ್ರತೆ ಎಷ್ಟಿತ್ತೆಂದು ದೃಶ್ಯದಲ್ಲಿ ಸ್ಪಷ್ಟವಾಗಿ ಕಂಡುಬಂದಿದೆ. ಸ್ಥಳೀಯರು ತಕ್ಷಣವೇ ಗಾಯಾಳುವನ್ನು ಹಾಸನದ ಹಿಮ್ಸ್ ಆಸ್ಪತ್ರೆಗೆ ದಾಖಲಿಸಿದ್ದಾರೆ.

## ಮಾ. 31ಕ್ಕೆ ಚನ್ನಕೇಶವ ಸ್ವಾಮಿ ರಥೋತ್ಸವ: ಸಿದ್ಧತೆ ಪರಿಶೀಲನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ವಿಶ್ವ ವಿಖ್ಯಾತ ಚನ್ನಕೇಶವ ಸ್ವಾಮಿ ರಥೋತ್ಸವ ಮಾ. 31 ಹಾಗೂ ಏ. 1ರಂದು ನಡೆಯಲಿದ್ದು, ಪುರಸಭೆ ಪ್ರಭಾರ ಅಧ್ಯಕ್ಷೆ ಉಷಾ ಸತೀಶ್ ಅವರು ಮಂಗಳವಾರ ಸಿದ್ಧತೆ ಪರಿಶೀಲಿಸಿದರು.

ಜಾತ್ರಾ ಹಿನ್ನೆಲೆ ಪುರಸಭೆಯಿಂದ ಭಕ್ತರ ಅನುಕೂಲಕ್ಕಾಗಿ ವಿವಿಧ ಸೌಲಭ್ಯ ಕಲ್ಪಿಸಲಾಗಿದೆ. ದೇವಸ್ಥಾನದ ಸಮೀಪದ ಕಲ್ಯಾಣಿಯಲ್ಲಿ ಸ್ನಾನದ ವ್ಯವಸ್ಥೆಗೆ ಅನುಕೂಲ ಮಾಡಲಾಗಿದ್ದು, ನೀರನ್ನು ತುಂಬಿಸಲಾಗುತ್ತಿದೆ. ತೆಪ್ಪೋತ್ಸವದ ದಿನ ಕಲ್ಯಾಣಿಯಲ್ಲಿ ನೀರು ತುಂಬಿಸಲು ಕ್ರಮ ಕೈಗೊಳ್ಳಲಾಗಿದೆ. ಭದ್ರತಾ ದೃಷ್ಟಿಯಿಂದ ಸೆಕ್ಯೂರಿಟಿ ನಿಯೋಜಿಸಲಾಗಿದೆ.

ಭಕ್ತರಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು 25 ಕಡೆಗಳಲ್ಲಿ ಮಾಡಲಾಗುತ್ತಿದ್ದು, ನಲ್ಲಿ ವ್ಯವಸ್ಥೆಗಳನ್ನು ಸ್ಥಾಪಿಸಲಾಗುತ್ತಿದೆ. ಜೊತೆಗೆ, ಜಾತ್ರಾ ದಿನಗಳಲ್ಲಿ ಯಾವುದೇ ತೊಂದರೆ ಉಂಟಾಗದಂತೆ ಮೊಬೈಲ್ ಟಾಯ್ಲೆಟ್‌ಗಳನ್ನು ಅಳವಡಿಸಲಾಗುತ್ತಿದೆ. ತುರ್ತು ಆರೋಗ್ಯ ಸಮಸ್ಯೆಗಳಿಗಾಗಿ ವೈದ್ಯರ ಸೇವೆಯನ್ನೂ ಸಿದ್ಧವಾಗಿಡಲಾಗಿದೆ.

ಜಾತ್ರಾ ದಿನದಂದು ನಡೆಯುವ ಸಂತೆ (ಮಾರುಕಟ್ಟೆ) ಯನ್ನು ತಾತ್ಕಾಲಿಕವಾಗಿ ಸ್ಥಳಾಂತರಿಸಲಾಗುತ್ತಿದ್ದು, ಭಕ್ತರ ಸಂಚಾರಕ್ಕೆ ಅಡಚಣೆ ಆಗದಂತೆ ಕ್ರಮ ಕೈಗೊಳ್ಳಲಾಗಿದೆ. ಪುರಸಭೆ ವತಿಯಿಂದ ಪೂರ್ವಭಾವಿ ಸಭೆ ನಡೆಸಿ ಎಲ್ಲಾ ಇಲಾಖೆಗಳ ಸಹಕಾರದೊಂದಿಗೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

ಪುರಸಭೆ ಪ್ರಭಾರ ಅಧ್ಯಕ್ಷೆ ಉಷಾ ಸತೀಶ್ ಮಾತನಾಡಿ, ಜಾತ್ರೆಗೆ ಲಕ್ಷಾಂತರ ಭಕ್ತರು ಆಗಮಿಸುವ ಹಿನ್ನೆಲೆಯಲ್ಲಿ ಅಗತ್ಯ ಸೌಲಭ್ಯ ಕಲ್ಪಿಸಲಾಗಿದೆ. ಕಲ್ಯಾಣಿಯಲ್ಲಿ ಸ್ನಾನದ ವ್ಯವಸ್ಥೆ, ಕುಡಿಯುವ ನೀರಿಗಾಗಿ 25 ಕಡೆಗಳಲ್ಲಿ, ಮೊಬೈಲ್ ಶೌಚಾಲಯ ಹಾಗೂ ತುರ್ತು ಆರೋಗ್ಯ ಸೇವೆಗಾಗಿ ವೈದ್ಯರ ನಿಯೋಜನೆ ಮಾಡಲಾಗಿದೆ.

ಭಕ್ತರ ಸಂಚಾರಕ್ಕೆ ಅಡಚಣೆ ಆಗದಂತೆ ಸಂತೆ ವ್ಯವಸ್ಥೆಯನ್ನು ಬೇರೆಡೆಗೆ ಸ್ಥಳಾಂತರಿಸಲಾಗುತ್ತಿದೆ. ಯಾವುದೇ ಅಸೌಕರ್ಯ ಉಂಟಾಗದಂತೆ ಪೂರ್ವಭಾವಿ ಸಭೆ ನಡೆಸಿ ಮುಂಜಾಗ್ರತಾ ಕ್ರಮ ಕೈಗೊಂಡಿದ್ದೇವೆ. ಈ ಜಾತ್ರೆ, ನಮ್ಮ ಎಲ್ಲರ ಮನೆ ಹಬ್ಬವಾಗಿದ್ದು, ಪಟ್ಟಣದ ನಾಗರಿಕರು ಸಹಕಾರ ನೀಡಬೇಕು. ಸ್ವಚ್ಛತೆ ಕಾಪಾಡುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಮನವಿ ಮಾಡಿದರು.

ಪುರಸಭೆ ಆರೋಗ್ಯಾಧಿಕಾರಿ ಲೋಹಿತ್ ಸೇರಿ ಇತರರು ಇದ್ದರು.

## ಚಾರ್ಜ್‌ಶೀಟ್ ಲೋಪ ಸರಿಪಡಿಸದಿದ್ದರೆ ಹೋರಾಟ: ಜೆಡಿಎಸ್ ಕಾನೂನು ಘಟಕ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರಿಗೆ ಸಂಬಂಧಿಸಿದ ಅಶ್ಲೀಲ ವೀಡಿಯೋಗಳಿದ್ದ ಪೆನ್‌ಡ್ರೈವ್ ಹಂಚಿಕೆ ಪ್ರಕರಣದ ಚಾರ್ಜ್‌ಶೀಟ್‌ನಲ್ಲಿ ಗಂಭೀರ ಲೋಪದೋಷಗಳಿವೆ. ಅವನ್ನು ತಕ್ಷಣ ಸರಿಪಡಿಸದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದು ಎಂದು ಜೆಡಿಎಸ್ ಕಾನೂನು ಘಟಕದ ಮಾಜಿ ಉಪಾಧ್ಯಕ್ಷ ಎಂ.ಬಿ. ವಿಶ್ವನಾಥ್ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ಜಿಲ್ಲಾ ಜೆಡಿಎಸ್ ಕಾನೂನು ಘಟಕದ ಪರವಾಗಿ ವಕೀಲ ಪೂರ್ಣಚಂದ್ರ ಅವರು ನೀಡಿದ ದೂರಿನ ಆಧಾರದ ಮೇಲೆ 52 ಮಂದಿಯನ್ನು ಆರೋಪಿಗಳನ್ನಾಗಿ ಮಾಡಲಾಗಿದೆ. ಆದರೆ, ಪೊಲೀಸರು ಪ್ರಕರಣದಲ್ಲಿ ನಿಷ್ಪಕ್ಷಪಾತ ತನಿಖೆ ನಡೆಸಿಲ್ಲ ಎಂದು ಆರೋಪಿಸಿದರು.


ಸಿ.ಆರ್. ಶಂಕರ್ ಅವರು ಪೆನ್‌ಡ್ರೈವ್ ಹಂಚುತ್ತಿದ್ದವರನ್ನು ಕಣ್ಣಾರೆ ಕಂಡಿದ್ದರೂ ಅವರ ಹೇಳಿಕೆಯನ್ನು ದಾಖಲಿಸಿಲ್ಲ. ಜೊತೆಗೆ, ಉಳಿದ ಆರೋಪಿಗಳನ್ನು ಚಾರ್ಜ್‌ಶೀಟ್‌ನಲ್ಲಿ ಸೇರಿಸದಿರುವುದಕ್ಕೆ ಯಾವುದೇ ಸ್ಪಷ್ಟ ಕಾರಣ ನೀಡಿಲ್ಲ ಎಂದು ಅವರು ಹೇಳಿದರು.

ಪೆನ್‌ಡ್ರೈವ್ ಹಂಚಿಕೆಗೆ ಯಾರು ಪ್ರೇರೇಪಿಸಿದರು, ಅದನ್ನು ಒದಗಿಸಿದವರು ಯಾರು ಎಂಬುದರ ಕುರಿತು ತನಿಖೆಯಲ್ಲಿ ಸ್ಪಷ್ಟತೆ ಇಲ್ಲ. ಪ್ರಕರಣದಲ್ಲಿ ನಿಷ್ಠಾವಂತ ಜೆಡಿಎಸ್ ಕಾರ್ಯಕರ್ತರನ್ನು ಉದ್ದೇಶಪೂರ್ವಕವಾಗಿ ಸಿಲುಕಿಸಲಾಗಿದೆ. ರಾಜಕೀಯ ಪ್ರೇರಿತವಾಗಿ ತನಿಖೆ ನಡೆಸಿ ಪ್ರಭಾವಿ ವ್ಯಕ್ತಿಗಳ ಹೆಸರುಗಳನ್ನು ಕೈಬಿಟ್ಟಿರುವ ಶಂಕೆ ವ್ಯಕ್ತವಾಗುತ್ತಿದೆ ಎಂದು ಅವರು ದೂರಿದರು.

ಪ್ರಕರಣದ ಕುರಿತು ಸಂಪೂರ್ಣ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಿ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ನೀಡಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಶೇಷಾದ್ರಿ, ವಿಶ್ವನಾಥ್, ನಯನ, ತರುಣ್, ಲೋಕೇಶ್ ಇತರರಿದ್ದರು.

## ನಾಳೆ ಜಿಲ್ಲಾಧಿಕಾರಿ ಕಚೇರಿ ಎದುರು ಮಾದಿಗ ಒಕ್ಕೂಟ ಪ್ರತಿಭಟನೆ




ಹಾಸನ: ಪರಿಶಿಷ್ಟ ಜಾತಿ 101 ಜಾತಿಗಳಿಗೆ ಪೂರಕವಾದ ಒಳ ಮೀಸಲಾತಿಯನ್ನು ಶೀಘ್ರವೇ ಜಾರಿ ಮಾಡಬೇಕು ಎಂದು ಒತ್ತಾಯಿಸಿ ಮಾ. 25ರಂದು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಮಾದಿಗ ಒಕ್ಕೂಟದ ಅಧ್ಯಕ್ಷ ಹೆಚ್.ಪಿ.ಶಂಕರ್‌ರಾಜು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಸಾಮಾಜಿಕ ನ್ಯಾಯದ ದೃಷ್ಟಿಯಿಂದ ಜನಸಂಖ್ಯೆಗೆ ಅನುಗುಣವಾಗಿ ಕೂಡಲೇ ಒಳ ಮೀಸಲಾತಿ ಜಾರಿ ಮಾಡಬೇಕು ಎಂದು ಆಗ್ರಹಿಸಿ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿ ಕಚೇರಿಗಳ ಎದುರು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಮಾ.27 ರಂದು ಒಳ ಮೀಸಲಾತಿ ಜಾರಿ ಸಂಬಂಧ ವಿಶೇಷ ಸಚಿವ ಸಂಪುಟ ಸಭೆ ಕರೆಯಲಾಗಿದೆ. ಅಂದು ರಾಜ್ಯದ ಎಲ್ಲಾ ಜಿಲ್ಲೆಗಳ ಮಾದಿಗ ಸಂಘಟನೆಗಳ ಸಭೆಯನ್ನು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಕರೆಯಲಾಗಿದೆ. ಈ ಸಭೆಗೆ ಎಲ್ಲರೂ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಸುಪ್ರೀಂಕೋರ್ಟ್ ತೀರ್ಪಿನ ಮೇರೆಗೆ ಒಳ ಮೀಸಲಾತಿ ನೀಡಿಕೆ ಸಂಬಂಧ ನ್ಯಾ.ನಾಗಮೋಹನ್‌ದಾಸ್ ಆಯೋಗ ರಚನೆ ಮಾಡಿ ವರದಿ ಪಡೆದ ನಂತರ ಮಾದಿಗ ಎಡಗೈ ಜಾತಿಗಳಿಗೆ ಶೇ.6, ಹೊಲೆಯ ಬಲಗೈ ಜಾತಿಗಳಿಗೆ ಶೇ.6 ಮತ್ತು ಸ್ಪರ್ಶ ಜಾತಿಗಳಿಗೆ ಶೇ.5 ರಷ್ಟು ನೀಡಲು ತೀರ್ಮಾನಿಸಿದ್ದರೂ ಅನಗತ್ಯ ವಿಳಂಬ ಮಾಡಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

## ಅರಸೀಕೆರೆ ಈಜುಕೊಳ ಗಬ್ಬೆಬ್ಬಿಸುತ್ತಿರುವ ಅನಾಗರಿಕರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

### ಇದೇನು ಸಭ್ಯತೆ । ಇದೇನು ಸಂಸ್ಕೃತಿ



ಅರಸೀಕೆರೆ: ನಗರಸಭೆ ವತಿಯಿಂದ ನಿರ್ಮಿಸಲಾದ ಅರಸೀಕೆರೆ ಈಜುಕೊಳವು ಸುಸಜ್ಜಿತವಾಗಿಯೂ ಆಕರ್ಷಕವಾಗಿಯೂ ನಿರ್ಮಾಣಗೊಂಡಿದ್ದು, ಸಾರ್ವಜನಿಕರಿಗೆ ಉತ್ತಮ ಸೌಲಭ್ಯ ಒದಗಿಸುವ ಉದ್ದೇಶ ಹೊಂದಿದೆ. ಆದರೆ, ಸಮರ್ಪಕ ನಿಯಂತ್ರಣ ಹಾಗೂ ಮೇಲ್ವಿಚಾರಣೆಯ ಕೊರತೆಯಿಂದ ಇದೀಗ ಈಜುಕೊಳದ ಪರಿಸರವೇ ಅಸಹನೀಯವಾಗುತ್ತಿರುವ ಬಗ್ಗೆ ಸ್ಥಳೀಯರು ತೀವ್ರ ಆತಂಕ ವ್ಯಕ್ತಪಡಿಸಿದ್ದಾರೆ.

ಈಜುಕೊಳಕ್ಕೆ ಪ್ರವೇಶದ ಮೇಲೆ ಯಾವುದೇ ಕಟ್ಟುನಿಟ್ಟಿನ ನಿಯಮಗಳು ಜಾರಿಯಾಗದಿರುವುದರಿಂದ, ನಾಗರಿಕ ಪ್ರಜ್ಞೆಯ ಕೊರತೆಯಿರುವ ಕೆಲವರು ಆವರಣಕ್ಕೆ ಮುಕ್ತವಾಗಿ ಪ್ರವೇಶಿಸುತ್ತಿದ್ದಾರೆ.

ಇದರ ಪರಿಣಾಮವಾಗಿ ಈಜುಕೊಳದ ಸ್ನಾನದ ಕೋಣೆಗಳು, ಸಿಂಕ್‌ಗಳು ಹಾಗೂ ಬಟ್ಟೆ ಬದಲಿಸುವ ಕೊಠಡಿಗಳಲ್ಲಿ ಗುಟ್ಕಾ ಉಗುಳುವ ದುಷ್ಪ್ರವೃತ್ತಿ ಹೆಚ್ಚಾಗಿದೆ.

ಸ್ಥಳೀಯ ಬಳಕೆದಾರರು ಹೇಳುವ ಪ್ರಕಾರ, ಇಂತಹ ವರ್ತನೆಗಳಿಂದ ಈಜುಕೊಳದ ಸ್ವಚ್ಛತೆ ಸಂಪೂರ್ಣವಾಗಿ ಹಾಳಾಗುತ್ತಿದೆ. ಕುಟುಂಬ ಸಮೇತ ಬರುವವರಿಗೆ ಅಸಹ್ಯಕರ ವಾತಾವರಣ ನಿರ್ಮಾಣವಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈಜುಕೊಳದ ನಿರ್ಮಾಣಕ್ಕೆ ಸರ್ಕಾರದಿಂದ ವೆಚ್ಚ ಮಾಡಲಾಗಿದ್ದು, ಸಾರ್ವಜನಿಕ ಆಸ್ತಿ ಎನ್ನುವ ಅರಿವು ಇಲ್ಲದೆ ಕೆಲವರ ನಿರ್ಲಕ್ಷ್ಯದಿಂದ ಅದು ಹಾನಿಗೊಳಗಾಗುತ್ತಿರುವುದು ವಿಷಾದನೀಯ ಸಂಗತಿಯಾಗಿದೆ. ಈ ಪರಿಸ್ಥಿತಿ ಮುಂದುವರಿದರೆ, ಉತ್ತಮ ಉದ್ದೇಶದಿಂದ ನಿರ್ಮಿಸಿದ ಈ ಸೌಲಭ್ಯವೇ ದುರ್ಬಳಕೆಗೆ ಒಳಗಾಗುವ ಸಾಧ್ಯತೆ ಇದೆ.

ಮೂಲಗಳ ಪ್ರಕಾರ, ನಗರಸಭೆ ಅಧಿಕಾರಿಗಳು ಈ ಬಗ್ಗೆ ಗಮನಹರಿಸದಿರುವುದು ಸಮಸ್ಯೆಯನ್ನು ಮತ್ತಷ್ಟು ಗಂಭೀರಗೊಳಿಸಿದೆ.

ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವುದು, ಭದ್ರತಾ ಸಿಬ್ಬಂದಿ ನಿಯೋಜನೆ, ಸಿಸಿಟಿವಿ ಕ್ಯಾಮೆರಾ ಅಳವಡಿಕೆ ಹಾಗೂ ದಂಡ ವಿಧಿಸುವ ಕ್ರಮಗಳನ್ನು ತಕ್ಷಣ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

> ಭಾರತೀಯರು ಸುಂದರವಾದ ಜಾಗಗಳನ್ನು ಹಾಳು ಮಾಡುವುದರಲ್ಲಿ ಎತ್ತಿದ ಕೈ. ಅರಸೀಕೆರೆಯ ಈಜುಕೊಳದ ವಾತಾವರಣ ಸುಂದರವಾಗಿದೆ. ಈಗ ಅಲ್ಲಿಯೂ ಗುಟ್ಕಾ ಉಗಿದು, ಬೀಡಿ, ಸಿಗರೇಟು ತುಂಡುಗಳನ್ನು ಹಾಕಿ ಹಾಳು ಮಾಡಲಾಗುತ್ತಿದೆ. ನಗರಸಭೆ ಈ ವಿಷಯದಲ್ಲಿ ಈಗಲೇ ಎಚ್ಚೆತ್ತುಕೊಳ್ಳಬೇಕು.
>
> **– ಶ್ರೀರಾಮ್ ಜಮದಗ್ನಿ, ಹವ್ಯಾಸಿ ಛಾಯಾಗ್ರಾಹಕ**

### ಸಮಸ್ಯೆಗೆ ಪರಿಹಾರವೇನು?

ಪ್ರವೇಶಕ್ಕೆ ನಿಯಮಿತ ಸಮಯ ಹಾಗೂ ಪಾಸ್ ವ್ಯವಸ್ಥೆ, ಭದ್ರತಾ ಸಿಬ್ಬಂದಿ ನಿಯೋಜನೆ

ಸಿಸಿಟಿವಿ ಕ್ಯಾಮೆರಾ ಅಳವಡಿಕೆ, ಸ್ವಚ್ಛತೆ ಕಾಪಾಡದವರಿಗೆ ದಂಡ, ನಾಗರಿಕರಲ್ಲಿ ಜಾಗೃತಿ ಮೂಡಿಸುವ ಅಭಿಯಾನ. ಒಟ್ಟಿನಲ್ಲಿ ಉತ್ತಮ ಉದ್ದೇಶದಿಂದ ನಿರ್ಮಿಸಿದ ಅರಸೀಕೆರೆ ಈಜುಕೊಳವು, ನಿರ್ಲಕ್ಷ್ಯ ಮತ್ತು ನಿಯಂತ್ರಣದ ಕೊರತೆಯಿಂದ ಹಾಳಾಗುವ ಮುನ್ನವೇ ಸಂಬಂಧಪಟ್ಟವರು ಎಚ್ಚೆತ್ತು ಕ್ರಮ ಕೈಗೊಳ್ಳಬೇಕೆಂಬುದು ಸಾರ್ವಜನಿಕರ ಒತ್ತಾಯವಾಗಿದೆ.

## ಕಾಡಾನೆ ಸಮಸ್ಯೆ : ಕೇಂದ್ರ ಸಚಿವರ ಭೇಟಿಯಾದ ವಿಶ್ವನಾಥ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ನವದೆಹಲಿ: ಸಕಲೇಶಪುರದ ಮಾಜಿ ಶಾಸಕ ಹೆಚ್.ಎಂ. ವಿಶ್ವನಾಥ್ ಅವರು ನವದೆಹಲಿಯಲ್ಲಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಮತ್ತು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿ ಮಲೆನಾಡು ಭಾಗದಲ್ಲಿ ಹೆಚ್ಚಿರುವ ಕಾಡಾನೆ ಸಮಸ್ಯೆ ಕುರಿತು ಮನವರಿಕೆ ಮಾಡಿಕೊಟ್ಟರು.

ಸಕಲೇಶಪುರ, ಆಲೂರು ಮತ್ತು ಬೇಲೂರು ತಾಲೂಕುಗಳಲ್ಲಿ ತೀವ್ರವಾಗಿರುವ ಕಾಡಾನೆ ಸಮಸ್ಯೆಗೆ ಶ್ರೀಲಂಕಾ ಮಾದರಿಯಲ್ಲಿ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮನವಿ ಮಾಡಿಕೊಂಡರು. ಇದಕ್ಕೆ ಸ್ಪಂದಿಸಿದ ಹೆಚ್.ಡಿ.ಕುಮಾರಸ್ವಾಮಿ ಅವರು ಕೇಂದ್ರ ಪರಿಸರ ಮತ್ತು ಅರಣ್ಯ ಸಚಿವರನ್ನು ಕಾಡಾನೆ ಸಮಸ್ಯೆ ಇರುವ ಪ್ರದೇಶಗಳಿಗೆ ಕರೆದುಕೊಂಡು ಬಂದು ಸಮಸ್ಯೆ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.



# ವಿದ್ಯಾರ್ಥಿಗಳು ಧನಾತ್ಮಕ ಚಿಂತನೆ ಬೆಳೆಸಿಕೊಳ್ಳಬೇಕು

## ನಿಶ್ಚಲಾನಂದನಾಥ ಸ್ವಾಮೀಜಿ ಸಲಹೆ | ಸ್ಪಂದನ ಯೋಜನೆ ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಯುವಕರು ಋಣಾತ್ಮಕ ಭಾವನೆ ತ್ಯಜಿಸಿ ಧನಾತ್ಮಕ ಭಾವನೆ ರೂಢಿಸಿಕೊಳ್ಳುವುದರ ಜೊತೆಗೆ ಜೀವನದಲ್ಲಿ ಶಿಸ್ತು, ಸಮಾಜ ಪ್ರೇಮ ಮೈಗೂಡಿಸಿಕೊಳ್ಳಬೇಕು ಎಂದು ಬೆಂಗಳೂರಿನ ಕಂಗೇರಿ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ನಿಶ್ಚಲಾನಂದನಾಥ ಸ್ವಾಮೀಜಿ ಹೇಳಿದರು.



ನಗರದ ಆರ್.ಸಿ. ರಸ್ತೆ ಗಂಧದ ಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಂಗಳವಾರ ಜನಕಲ್ಯಾಣ ರಿಸರ್ಚ್ ಮತ್ತು ಚಾರಿಟಬಲ್ ಟ್ರಸ್ಟ್, ಪರಿಪೂರ್ಣ ಚಾರಿಟಬಲ್ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ಸ್ಪಂದನ ಯೋಜನೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಯುವಕರಿಗೆ ಜೀವನದಲ್ಲಿ ಸದಾ ಗುರಿ ಇರಬೇಕು. ಜೀವನದಲ್ಲಿ ಯಾವ ವ್ಯಕ್ತಿ ಆಳಾಗಬಲ್ಲನೊ, ಅವನೇ ಮುಂದೊಂದು ದಿನ ಅರಸನಾಗಿ ಸಾಧಕನಾಗುತ್ತಾನೆ. ಕಲಿಕೆಯ ವಿಚಾರದಲ್ಲಿ ಆಳಾಗಿ ಜ್ಞಾನ ಸಂಪಾದನೆ ಮಾಡಿದರೆ ಜೀವಿತದ ಅವಧಿಯಲ್ಲಿ ಒಂದು ಉನ್ನತ ಸಾಧನೆ ಮಾಡಿ ಸಾಧಕನಾಗಬಹುದು. ಯಾವುದೇ ವ್ಯಕ್ತಿ ಕಷ್ಟಪಟ್ಟರೆ ಮಾತ್ರ ಬದುಕಿನ ಅರ್ಥ ತಿಳಿಯುವುದೇ ಹೊರತು, ಕಷ್ಟ ಪಡದವನಿಗಲ್ಲ. ಎಲ್ಲಾ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಶಿಸ್ತು ಮತ್ತು ಸಂಸ್ಕಾರವನ್ನು ಕಳಿಯಬೇಕು ಆಗ ಮಾತ್ರ ಸಮಾಜಮುಖಿ ಕೆಲಸ ಮಾಡಲು ಸಾಧ್ಯವಾಗುತ್ತದೆ. ಬಡ ರೈತರ ಮಕಳು ಆಯಕಟ್ಟಿನ ಉದ್ಯೋಗ ಸಿಕ್ಕರೆ ಸಮಾಜ ಸರ್ವೋದಯವಾಗುತ್ತದೆ. ಜನ ಕಲ್ಯಾಣ ಟ್ರಸ್ಟ್ ಮತ್ತು ಪರಿಪೂರ್ಣ ಟ್ರಸ್ಟ್‌ಗಳು ಸೇರಿ ಸಮಾಜಮುಖಿ ಸೇವೆ ಮಾಡುತ್ತೀವೆ. ಜೀವನದಲ್ಲಿ ಶಿಸ್ತು, ಸಮಾಜ ಪ್ರೇಮ ಮತ್ತು ಸಂಯಮವು ಹೆಬ್ಬಾರ್ ಅವರಿಂದ ಕಲಿಯ ಬೇಕಾದ ವಿಷಯ. ಅವರ ಟ್ರಸ್ಟ್ ವತಿಯಿಂದ ನಡೆಸುತ್ತಿರುವ ಸ್ಪಂದನಾ ಯೋಜನೆ ಕಾರ್ಯ ಅತ್ಯಂತ ಮೌಲ್ಯಯುತವಾದುದು ಎಂದು ಹೇಳಿದರು.

ಜನಕಲ್ಯಾಣ ರಿಸರ್ಚ್ ಮತ್ತು ಚಾರಿಟಬಲ್ ಟ್ರಸ್ಟ್, ಪರಿಪೂರ್ಣ ಚಾರಿಟಬಲ್ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಡಾ.ಬಿ.ಸಿ. ರವಿ ಕುಮಾರ್ ಮಾತನಾಡಿ, ಸ್ಪಂದನ ಯೋಜನೆ ಕೇವಲ ಆರ್ಥಿಕ ಯೋಜನೆಯಲ್ಲ ಬಡತನದ ಬೇಗೆಯಲ್ಲಿ ಬೆಂದಿರುವಂತಹ ವಿದ್ಯಾರ್ಥಿಗಳು ತಂದೆ ತಾಯಿಯನ್ನು ಕಳೆದುಕೊಂಡು ಏಕಾಂಗಿಯಾಗಿರುವ ವಿದ್ಯಾರ್ಥಿಗಳಿಗೆ ನಾವಿದ್ದೇವೆ ಎಂದು ಆತ್ಮಧೈರ್ಯ ತುಂಬುವ ಯೋಜನೆಯಾಗಿದೆ. ಈ ವರ್ಷ 300 ಅರ್ಜಿ ಬಂದಿದ್ದವು, ಆದರೆ 53 ಜನರನ್ನು ನೇರ ಸಂದರ್ಶನ ಮಾಡಿ ಜನ ಕಲ್ಯಾಣ ಟ್ರಸ್ಟ್ ಮತ್ತು ಪರಿಪೂರ್ಣ ಟ್ರಸ್‌ಗಳು ಬಡತನದಿಂದ ಶಿಕ್ಷಣ ವಂಚಿತರಾಗಿರುವ ಮಕ್ಕಳಿಗೆ ಸಹಾಯ ಮಾಡಲಾಗುತ್ತಿದೆ. ಮನುಷ್ಯನಲ್ಲಿ ಮಾನವೀಯತೆ ಎಂಬ ಹಣತೆ ಇದ್ದೆ ಇರುತ್ತದೆ. ಅದು ಒಂದಲ್ಲ ಒಂದು ದಿನ ಆಚೆ ಬಂದೆ ಬರುತ್ತದೆ ಎಂದರು.

ಸಾಧ್ಯ ಟ್ರಸ್ಟ್ ಸಂಸ್ಥಾಪಕಿ ಕೆ.ಟಿ. ಆರತಿ ಮಾತನಾಡಿ, ಬಡತನವನ್ನು ಹೋಗಲಾಡಿಸುವುದು ಕೇವಲ ನಮ್ಮ ಶ್ರಮದಿಂದ ಮತ್ತು ಕೌಶಲ್ಯದಿಂದ ಮೊಬೈಲ್‌ಫೋನ್‌ಗಳ ಬಳಕೆಯನ್ನು ಕಡಿಮೆ ಮಾಡಿ ವಿದ್ಯಾರ್ಥಿನಿಯರು ಆರೋಗ್ಯದ ಬಗ್ಗೆ ಗಮನ ಕೊಡಬೇಕು, ಕಲಿಕೆಯ ಕಡೆ ಗಮನ ಕೊಡಿ ಹಲವಾರು ಭಾಷೆಗಳನ್ನು ಕಲಿತು ಸಮಾಜದಲ್ಲಿ ಮಾದರಿಯುತ ವ್ಯಕ್ತಿಗಳಾಗಿ ಮುಂದೆ ಬರಬೇಕು. ಮನೆಯಲ್ಲಿ ತಂದೆ ತಾಯಿಗೆ ಎಷ್ಟು ಸಹಾಯ ಮಾಡುತ್ತೀರಾ ಅಷ್ಟು ಸಮಾಜಕ್ಕೆ ಸಹಾಯ ಮಾಡುತ್ತೀರಿ. ಗುರು ಹಿರಿಯರಿಗೆ ಕೊಡುವುದರ ಜೊತೆಗೆ ಅವರ ಮಾರ್ಗದರ್ಶನದಲ್ಲಿ ನಡೆಯಬೇಕು ಎಂದು ಮಾತನಾಡಿದರು.

ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಮಾತನಾಡಿ, ಈ ಕಾರ್ಯಕ್ರಮ ಯುವ ಮನಸ್ಸು ಮತ್ತು ಸಮುದಾಯಕ್ಕೆ ಪ್ರೇರಣೆ. ಈ ಕಾರ್ಯಕ್ರಮದಲ್ಲಿ ದೊರೆತ ಈ ಹಣವನ್ನು ನಿಮ್ಮ ಶಿಕ್ಷಣಕ್ಕಾಗಿ ಬಳಸಿಕೊಳ್ಳಿ. ನಿಮ್ಮ ವಿದ್ಯೆಯಿಂದ ಸಮಾಜಕ್ಕೆ ಏನಾದರು ಕೊಡಬಕು. ಬಡತನದ ಹಸಿವಿದ್ದವರು ಮಾತ್ರ ಬೆಳಿಯ ಬೇಕು ಅನ್ನುವ ಹಠ ಹುಟ್ಟಲು ಸಾದ್ಯ. ಈಗಿನ ವಿದ್ಯಾರ್ಥಿಗಳು ಗಣ್ಯರ ಸ್ಥಾನಕ್ಕೆ ಬೆಳೆಯ ಬೇಕು ಎಂದರೆ ಶ್ರಮ ಪಡಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪರಿಪೂರ್ಣ ಚಾರಿಟಬಲ್ ಟ್ರಸ್ಟ್‌ನ ಪ್ರೊ.ಎಚ್.ವಿ. ಲಕ್ಷ್ಮೀನಾರಾಯಣ, ಡಾ. ಗುರುರಾಜ್ ಹೆಬ್ಬಾರ್ ಅವರ ಆದರ್ಶವನ್ನ ವಿದ್ಯಾರ್ಥಿಗಳಲ್ಲಿ ಅರಿವನ್ನು ಉಂಟು ಮಾಡಬೇಕು ಎಂಬ ಚಿಂತನೆ ಹಾಗೂ ಸಮಾಜಕ್ಕೆ ಮಾದರಿಯಾಗಿದ್ದರು. ಈ ಸಂಸ್ಥೆ ವಿದ್ಯಾರ್ಥಿಗಳಿಗೆ ಸಹಾಯ ಮಾಡಲು ಮತ್ತು ಅವರನ್ನು ಉತ್ತೇಜಿಸಲು ಸಹಾಯ ಮಾಡುತ್ತಿದೆ. ಡಾ ಗುರುರಾಜ್ ಹೆಬ್ಬಾರ್ ಅವರ ಆತ್ಮೀಯವರಲ್ಲಿಯೇ ಇಂತಹ ಕಾರ್ಯಕ್ರಮಗಳನ್ನು ಮಾಡುತ್ತಿದ್ದೇವೆ ಎಂದು ಹೇಳಿದರು. ತಂದೆ ತಾಯಿಗಳಿಗೆ ಮಕ್ಕಳು ಹೊರೆಯಾಗಿದ್ದಾರೆ ಎಲ್ಲರೂ ನಿಮ್ಮ ಕೈಯಲ್ಲಿ ಆದಷ್ಟು ಸಹಾಯ ಮಾಡಬೇಕು ಈ ಕಾರ್ಯಕ್ರಮದಲ್ಲಿ ಎಲ್ಲರೂ ಪ್ರತ್ಯಕ್ಷವಾಗಿ ಪರೋಕ್ಷವಾಗಿ ಸೇವೆ ಸಲ್ಲಿಸಿದರೆ ಎಂದು ಹೇಳಿದರು.

ವೈದ್ಯ ಡಾ. ಅಬ್ದುಲ್ ಬಷೀರ್, ಅಧ್ಯಾಪಕ ನಂದನ್, ಸಮಾಜ ಸೇವಕ ಶ್ರೀಧರ್, ಡಾ. ಕಾವ್ಯಶ್ರೀ ಹಾಗೂ ಇತರರು ಹಾಜರಿದ್ದರು.

# ವಿದ್ಯಾರ್ಥಿಗಳ ಕಲಿಕೆಗೆ ಆಕಾಶವಾಣಿ ನೆರವು ಅಧಿಕ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶಾಲಾ ಕಾಲೇಜುಗಳಲ್ಲಿ ಅಧ್ಯಯನ ಮಾಡುವ ಯುವಕ-ಯುವತಿಯರು ಆಕಾಶವಾಣಿ ಕಾರ್ಯಕ್ರಮಗಳನ್ನು ಆಲಿಸುವುದರಿಂದ ಶೈಕ್ಷಣಿಕ ಕಲಿಕೆಗೆ ಸಹಕಾರಿಯಾಗಲಿದೆ ಎಂದು ಹಾಸನ ಆಕಾಶವಾಣಿ ಮುಖ್ಯಸ್ಥೆ ಸುಜಾತಾ ಎಸ್. ತಳವಾರ ಅಭಿಪ್ರಾಯಪಟ್ಟರು.

ನಗರದ ಬೆಸ್ಟ್ ಪ್ರಥಮ ದರ್ಜೆ ಕಾಲೇಜಿನಲ್ಲಿ ಈಚೆಗೆ ಹಾಸನ ಆಕಾಶವಾಣಿ ಕೇಂದ್ರದ ವತಿಯಿಂದ ಪದವಿ ವಿದ್ಯಾರ್ಥಿಗಳಿಗೆ ನಡೆದ ರಸಪ್ರಶ್ನೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕಳೆದ ಹಲವು ದಿನಮಾನಗಳಿಂದ ಯುವಕರಲ್ಲಿ ಆಕಾಶವಾಣಿ ಕೇಳುವಿಕೆ ಕಡಿಮೆಯಾಗುತ್ತಿರುವುದು ವಿಷಾದನೀಯ. ವಿದ್ಯಾರ್ಥಿಗಳಿಗಾಗಿ ಹಲವಾರು ಕಾರ್ಯಕ್ರಮಗಳನ್ನ ಆಕಾಶವಾಣಿ ಪ್ರಸಾರ ಮಾಡಿಕೊಂಡು ಬರುತ್ತಿದೆ. ಆಕಾಶವಾಣಿಯಲ್ಲಿ ಪ್ರಸಾರವಾಗುವ ಪ್ರತಿಯೊಂದು ಕಾರ್ಯಕ್ರಮವು ಯುವಜನರಿಗೆ ಸಹಕಾರಿಯಾಗಿದ್ದು, ಬಿಡುವಿನ ವೇಳೆಯಲ್ಲಿ ಆಕಾಶವಾಣಿಯ ಕಾರ್ಯಕ್ರಮಗಳನ್ನು ಆಲಿಸಬೇಕು. ಅದರಲ್ಲೂ ಬಹುಮುಖ್ಯವಾಗಿ ವಿದ್ಯಾರ್ಥಿಗಳಿಗಾಗಿಯೇ ವಿನೂತನ ಶೈಕ್ಷಣಿಕ ಕಾರ್ಯಕ್ರಮ ಆಯೋಜನೆ ಮಾಡಲಾಗುತ್ತಿದ್ದು, ಅದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಬೆಸ್ಟ್ ಪ್ರಥಮ ದರ್ಜೆ ಕಾಲೇಜಿನ ಆಡಳಿತಾಧಿಕಾರಿ ಡಾ. ಬಿ. ವಿಕ್ರಂ ಮಾತನಾಡಿ, ಆಕಾಶವಾಣಿಯನ್ನು ಪ್ರತಿನಿತ್ಯ ಆಲಿಸಿದ ಅನೇಕರು ಇಂದು ಹಲವು ಕ್ಷೇತ್ರಗಳಲ್ಲಿ ಸಾಧನೆ ಮಾಡಿದ್ದಾರೆ ಎಂದರೆ ತಪ್ಪಾಗಲಾರದು. ನಾವುಗಳು ಚಿಕ್ಕ ವಯಸ್ಸಿನಲ್ಲಿ ಆಕಾಶವಾಣಿಯಲ್ಲಿ ಬರುವ ಅತ್ಯುತ್ತಮ ಕಾರ್ಯಕ್ರಮಗಳನ್ನು ಹಾಗೂ ಸುಮಧುರ ಗೀತೆಗಳನ್ನು ಆಲಿಸಿ ಜೀವನದಲ್ಲಿ ಒಂದಿಷ್ಟು ಒಳ್ಳೆಯ ಗುಣಗಳನ್ನು ಕಲಿಯಲು ಸಾಧ್ಯವಾಯಿತು. ಹಾಗೆಯೇ ಕನ್ನಡ ಭಾಷೆಯನ್ನು ಮತ್ತಷ್ಟು ಉತ್ತಮ ರೀತಿಯಲ್ಲಿ ಕಲಿಯಲು ರೇಡಿಯೋ ಸಹಕಾರಿಯಾಯಿತು ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಕೆ.ಸಿ. ನವೀನ್ ಮಾತನಾಡಿ, ಆಕಾಶವಾಣಿ ವತಿಯಿಂದ ಕಾಲೇಜು ಹಂತಗಳಲ್ಲಿ ಇಂತಹ ಕಾರ್ಯಕ್ರಮಗಳ ನಡೆಸುವುದರಿಂದ ಇಂದಿನ ಮಕ್ಕಳನ್ನು ಮತ್ತೊಮ್ಮೆ ಆಕಾಶವಾಣಿಯ ಕಾರ್ಯಕ್ರಮಗಳ ಆಲಿಸುವಿಕೆಗೆ ಸಹಕಾರಿಯಾಗಲಿದೆ ಎಂದು ಹೇಳಿದರು.

ಆಕಾಶವಾಣಿ ತಾಂತ್ರಿಕ ಸಹಾಯಕ ರಾಜು ಮ್ಯಾತ್ಯು, ಉದ್ಘೋಷಕ ಎಚ್.ವಿ. ಷಣ್ಮುಖ, ತಾಂತ್ರಿಕ ಸಹಾಯಕಿ ಲಿಖಿತ, ಹಾಸನಂಬ ರೂರಲ್ ಎಜುಕೇಶನ್ ಟ್ರಸ್ಟ್ ಅಧ್ಯಕ್ಷ ಪಿ.ಎಸ್. ಮಂಜೇಗೌಡ, ಖಜಾಂಚಿ ಈಶ್ವರಪ್ಪ, ಆಡಳಿತಾಧಿಕಾರಿ ಡಾ.ಎಂ.ಡಿ. ನಿತ್ಯಾನಂದ ಹಾಗೂ ಉಪನ್ಯಾಸಕರು ಹಾಜರಿದ್ದರು.

# ಬೆಳಗೀಹಳ್ಳಿ ಪ್ರಾಥಮಿಕ ಸಹಕಾರ ಸಂಘಕ್ಕೆ ಗೋಪಿ ಅಧ್ಯಕ್ಷ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನ ಬೆಳಗೀಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಕಾವಲು ಹೊಸೂರು ಗ್ರಾಮದ ಹೆಚ್.ಎಸ್. ಗೋಪಿ ಅವರು ಸೋಮವಾರ ಅವಿರೋಧ ಆಯ್ಕೆಯಾದರು.



ಸಂಘವು 11 ನಿರ್ದೇಶಕರ ಬಲ ಹೊಂದಿದ್ದು ಚುನಾವಣಾ ಪ್ರಕ್ರಿಯೆಯಲ್ಲಿ 10 ಮಂದಿ ಪಾಲ್ಗೊಂಡಿದ್ದರು.

ಹೆಚ್.ಎಸ್.ಗೋಪಿ ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಚುನಾವಣಾ ಅಧಿಕಾರಿಗಳು ಹೆಚ್.ಎಸ್.ಗೋಪಿ ಅವರನ್ನೇ ಅವಿರೋಧ ಆಯ್ಕೆ ಮಾಡಿ ಘೋಷಿಸಿದರು.

ಬಳಿಕ ನೂತನ ಅಧ್ಯಕ್ಷ ಹೆಚ್.ಎಸ್.ಗೋಪಿ ಮಾತನಾಡಿ, ಕ್ಷೇತ್ರದ ಶಾಸಕ ಸಿ.ಎನ್.ಬಾಲಕೃಷ್ಣ ಅವರ ಮಾರ್ಗದರ್ಶನದಲ್ಲಿ ಎಲ್ಲಾ ನಿರ್ದೇಶಕರ ಸಹಕಾರದೊಂದಿಗೆ ಸಂಘದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಲಾಗುವುದು ಎಂದರು.

ಸಂಘವು ಪಾರದರ್ಶಕ ವ್ಯವಹಾರದೊಂದಿಗೆ ಉತ್ತಮ ಯೋಜನೆಗಳನ್ನು ರೂಪಿಸುವ ಮೂಲಕ ಫಲಾನುಭವಿಗಳಿಗೆ ಹೆಚ್ಚಿನ ಸಹಕಾರಿಯಾಗಿದೆ. ಶಾಸಕರ ಚಿಂತನೆ ಹಾಗೂ ಮಾರ್ಗದರ್ಶನದಲ್ಲಿ ಕೇವಲ 10 ಗುಂಟೆ ಜಮೀನು ಹೊಂದಿರುವ ರೈತರಿಗೂ ಸಹ ಬಡ್ಡಿ ರಹಿತ ಸಾಲ ನೀಡುವ ವ್ಯವಸ್ಥೆ ಮಾಡಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದು ತಿಳಿಸಿದರು.

ಹೆಚ್‌ಡಿಸಿಸಿ ಬ್ಯಾಂಕ್ ಮೇಲ್ವಿಚಾರಕ ಅಭಿಲಾಷ್ ಹಾಗೂ ಮಧು ಅವರು ಚುನಾವಣಾ ಕರ್ತವ್ಯ ನಿರ್ವಹಿಸಿದರು. ಅವಿರೋಧವಾಗಿ ಆಯ್ಕೆಯಾದ ಹೆಚ್.ಎಸ್.ಗೋಪಿ ಅವರನ್ನು ಸಂಘದ ವತಿಯಿಂದ ಅಭಿನಂದಿಸಲಾಯಿತು. ಕಾರ್ಯಕರ್ತರು ಸಿಹಿ ಹಂಚಿ ಸಂಭ್ರಮಿಸಿದರು.


ಹೇಮಾವತಿ ಸಹಕಾರ ಸಕ್ಕರೆ ಕಾರ್ಖಾನೆ ಮಾಜಿ ಅಧ್ಯಕ್ಷ ತೋಟಿ ಜಯರಾಮ್, ತಾಲ್ಲೂಕು ಜೆಡಿಎಸ್ ಮುಖಂಡ ನಾಗೇಂದ್ರ, ಬಾಬು, ಟಿಎಪಿಸಿಎಂಎಸ್ ನಿರ್ದೇಶಕ ತೋಟಿ ನಾಗರಾಜು, ಮಾಜಿ ಉಪ ಪ್ರಧಾನರು ಟಿ.ನಂಜಪ್ಪ, ಪ್ರಮುಖರಾದ ಸುಂದರ್, ಸಂಘದ ಮಾಜಿ ಅಧ್ಯಕ್ಷ ಟಿ.ಪಿ.ಮಂಜು, ಕೆ.ಪಿ.ಅಶೋಕ್, ಉಪಾಧ್ಯಕ್ಷೆ ಭಾರತಿ, ನಿರ್ದೇಶಕರಾದ ಕೆ.ಎನ್.ನಾಗರಾಜ್, ಬಿ.ಕೆ.ರವಿ, ಟಿ.ಎನ್.ನಟರಾಜ್, ಬಿ.ಎಸ್.ರವಿ, ಎಂ.ಆರ್.ಸುರೇಶ್, ಜಿ.ಮಂಜುನಾಥ್, ರಾಧಮ್ಮ, ರಂಗಸ್ವಾಮಿ, ಲೆಕ್ಕಾಧಿಕಾರಿಯಶಸ್ವಿನಿ, ನೌಕರರಾದ ಧನಂಜಯ್, ಕುಮಾರಸ್ವಾಮಿ, ಚಂದ್ರಕಲಾ ಹಾಗೂ ಇತರರು ಇದ್ದರು.

# ಜಿಲ್ಲೆಯಲ್ಲಿದ್ದಾರೆ 1,310 ಕ್ಷಯ ರೋಗಿಗಳು

## 64 ಗ್ರಾ.ಪಂ. ಕ್ಷಯ ರೋಗ ಮುಕ್ತ | ಗುಣಮುಖರ ಸಂಖ್ಯೆಯೂ ಅಧಿಕ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ 1,310 ಕ್ಷಯ ರೋಗಿಗಳು ಕಂಡು ಬಂದಿದ್ದು, ಮುಂದಿನ ವರ್ಷಕ್ಕೆ ಅದರ ಪ್ರಮಾಣ ಕಡಿಮೆ ಮಾಡುವ ಉದ್ದೇಶದಿಂದ ಹಲವು ಪರಿಣಾಮಕಾರಿ ಕಾರ್ಯಕ್ರಮಗಳನ್ನು ಆರೋಗ್ಯ ಇಲಾಖೆ ಹಾಕಿಕೊಂಡಿದೆ.



2025ನೇ ಸಾಲಿನಲ್ಲಿ ಕಂಡುಬಂದಿರುವ 1,310 ರೋಗಿಗಳಲ್ಲಿ 929 ಪುರುಷ, 381 ಮಹಿಳೆಯರು 23 ಮಕ್ಕಳಿದ್ದಾರೆ. ಅವರಲ್ಲಿ 63 ಜನರಿಗೆ ಕ್ಷಯ ರೋಗದೊಂದಿಗೆ ಹೆಚ್‌ಐವಿ, 245 ಜನರಿಗೆ ಮಧುಮೇಹ ಹಾಗೂ 48 ಜನರು ಬಹು ಔಷಧ ನಿರೋಧಕ ಸಮಸ್ಯೆಯಿಂದ ಬಳಲುತ್ತಿದ್ದಾರೆ. 2024ರಲ್ಲಿ 1,377 ಕ್ಷಯ ರೋಗಿಗಳು ಪತ್ತೆಯಾಗಿದ್ದರು. ಅದರಲ್ಲಿ ಶೇ. 89 ಅಂದರೆ 1,227 ರೋಗಿಗಳು ಗುಣಮುಖರಾಗಿದ್ದಾರೆ.

ಒಂದು ಲಕ್ಷಕ್ಕೆ 3 ಸಾವಿರ ಪರೀಕ್ಷೆ ಗುರಿ:

ಸಂಪೂರ್ಣ ಕ್ಷಯ ರೋಗ ನಿರ್ಮೂಲನೆಗಾಗಿ ಸರ್ಕಾರಗಳು ಹತ್ತು ಹಲವು ಯೋಜನೆ ಹಾಕಿಕೊಂಡಿದ್ದರೂ ಗುರಿ ತಲುಪಲು ಸಾಧ್ಯವಾಗುತ್ತಿಲ್ಲ. 2025ನೇ ಸಾಲಿನಲ್ಲಿ ಜಿಲ್ಲೆಗೆ ಒಂದು ವರ್ಷಕ್ಕೆ 1 ಲಕ್ಷ ಜನಸಂಖ್ಯೆಗೆ 3 ಸಾವಿರ ಅಂದರೆ ವಾರ್ಷಿಕ 50,400 ಸಂಭಾವ್ಯ ಕ್ಷಯ ರೋಗಿಗಳನ್ನು ಪರೀಕ್ಷಿಸುವ ಗುರಿ ಹಾಕಿಕೊಳ್ಳಲಾಗಿತ್ತು. ಅದರಂತೆ ವಾರ್ಷಿಕ 57,231 ಜನರನ್ನು ಪರೀಕ್ಷೆಗೆ ಒಳಪಡಿಸಲಾಗಿದೆ. ಖಾಸಗಿ ವಲಯದಲ್ಲಿ ವಾರ್ಷಿಕ 350 ಕ್ಷಯ ರೋಗಿಗಳ ಪತ್ತೆ ಗುರಿ ನೀಡಿದ್ದು, ಒಟ್ಟು 317 (ಶೇ. 91) ಗುರಿ ಸಾಧಿಸಲಾಗಿದೆ.

ರೋಗಿಗಳಿಗೆ ಸರ್ಕಾರದ ನೆರವು:

ಕ್ಷಯ ರೋಗದಿಂದ ಬಳಲುವವರಿಗೆ ನೆರವಾಗಲೆಂದು ಕೇಂದ್ರ ಸರ್ಕಾರ ನಿಕ್ಷಯ್ ಪೋಷನ್ ಯೋಜನೆ ಜಾರಿಗೊಳಿಸಿದ್ದು ಪ್ರತಿ ತಿಂಗಳು ತಲಾ 1 ಸಾವಿರ ರೂ. ವಿತರಿಸಲಾಗುತ್ತದೆ. ಚಿಕಿತ್ಸೆ ಅವಧಿಯಲ್ಲಿ 6 ರಿಂದ 20 ಸಾವಿರ ರೂ. ವರೆಗೆ ವೆಚ್ಚ ದೊರೆಯಲಿದೆ. ಸೇವಾ ಸಿಂಧು ಮೂಲಕ ಅರ್ಜಿ ಸಲ್ಲಿಸಿ ರೋಗಿಗಳು ಈ ಯೋಜನೆಯ ಸೌಲಭ್ಯ ಪಡೆಯಬಹುದಾಗಿದೆ. ಜಿಲ್ಲೆಯ ಶೇ. 96 ರಷ್ಟು ರೋಗಿಗಳು ಈ ಸೌಲಭ್ಯ ಪಡೆಯುತ್ತಿದ್ದಾರೆ.

ಜಿಲ್ಲೆಯಲ್ಲಿ 9 ಚಿಕಿತ್ಸಾ ಘಟಕಗಳು ಕಾರ್ಯನಿರ್ವಹಿಸುತ್ತಿವೆ. 2026ನೇ ಸಾಲಿನಲ್ಲಿ 36 ನಿಗದಿತ ಮೈಕ್ರೋಸ್ಕೋಪಿಕ್ ಕಫ ಪರೀಕ್ಷಾ ಕೇಂದ್ರ ಹಾಗೂ ಪರೀಕ್ಷೆಗೆ ಬಳಸುವ 28 ಅತ್ಯಾಧುನಿಕ **Molecular Testing** ಪ್ರಯೋಗಾಲಯ ತೆರೆಯಲಾಗಿದೆ. ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚನ್ನರಾಯಪಟ್ಟಣ, ಅರಸೀಕೆರೆ, ಹೊಳೆನರಸೀಪುರ, ಆಲೂರು, ಅರಕಲಗೂಡು, ಬೇಲೂರು, ಸಕಲೇಶಪುರ ಸಾರ್ವಜನಿಕ ಆಸ್ಪತ್ರೆ ಹಾಗು ಮೊಸಳೆಹೊಸಹಳ್ಳಿ, ಶಾಂತಿಗ್ರಾಮ, ಕೊಣನೂರು, ಹಳ್ಳಿಮೈಸೂರು, ಪಡುವಲಹಿಪ್ಪೆ, ದೊಡ್ಡಕುಂಚೇವು, ಉದಯಪುರ, ನುಗ್ಗೇಹಳ್ಳಿ, ಶ್ರವಣಬೆಳಗೊಳ, ಹಿರೀಸಾವೆ, ಗಂಡಸಿ, ಜೆ.ಸಿ.ಪುರ, ಹಳೇಬೀಡು, ಅರೇಹಳ್ಳಿ ಸಮುದಾಯ ಆರೋಗ್ಯ ಕೇಂದ್ರ ಮತ್ತು ಕಣಕಟ್ಟೆ, ಜಾವಗಲ್, ರಾಮನಾಥಪುರ, ಬಾಣಾವರ, ಹಾಸನದ ಕೃಷ್ಣ ಆಸ್ಪತ್ರೆ ಹಾಗು ಯಸಳೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ CBNAAT-04 ಅತ್ಯಾಧುನಿಕ ಯಂತ್ರಗಳ ಮೂಲಕ ಪರೀಕ್ಷೆ ನಡೆಸಲಾಗುತ್ತಿದೆ.


**ಕ್ಷಯ ಮುಕ್ತ ಗ್ರಾ.ಪಂ.ಗೆ ಪುರಸ್ಕಾರ**

ಕ್ಷಯ ರೋಗ ಮುಕ್ತ ಗ್ರಾಮ ನಿರ್ಮಾಣದಲ್ಲಿ ಸಮುದಾಯ ಪಾಲ್ಗೊಳ್ಳುವಿಕೆಗೆ ಸರ್ಕಾರ ವಿಶೇಷ ಕಾರ್ಯಕ್ರಮ ಹಮ್ಮಿಕೊಂಡಿದೆ. ರೋಗ ತಡೆಗಟ್ಟುವಲ್ಲಿ ಆರೋಗ್ಯಕರ ಸ್ಪರ್ಧೆ ಹೆಚ್ಚಿಸುವ ಸಂಬಂಧ ಗ್ರಾಮ ಪಂಚಾಯಿತಿಗಳನ್ನು ಗುರುತಿಸಿ ಪುರಸ್ಕರಿಸಲಾಗುತ್ತಿದೆ. 2023ನೇ ಸಾಲಿನಲ್ಲಿ 6 ಮತ್ತು 2024ರಲ್ಲಿ 29, 2025ನೇ ಸಾಲಿನಲ್ಲಿ 65 ಗ್ರಾಮ ಪಂಚಾಯಿತಿಗಳನ್ನು ಕ್ಷಯ ಮುಕ್ತವೆಂದು ಗುರುತಿಸಲಾಗಿದೆ.

# ಆಶ್ರಯ ಯೋಜನೆಗೂ ವಿನಾಕಾರಣ ಅಡ್ಡಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಆಶ್ರಯ ನಿವಾಸಿಗಳಿಗಾಗಿ ಮೀಸಲಿಟ್ಟಿರುವ ಜಾಗದಲ್ಲಿ ಯೋಜನೆ ಸಫಲವಾಗಬಾರದೆಂಬ ದುರುದ್ದೇಶದಿಂದ ಪುರಸಭೆ ಸದಸ್ಯರೇ ಸ್ಥಳೀಯರಿಂದ ನ್ಯಾಯಾಲಯಕ್ಕೆ ಅರ್ಜಿ ಹಾಕಿಸುತ್ತಿದ್ದಾರೆ ಎಂದು ಪುರಸಭೆ ಮಾಜಿ ಅಧ್ಯಕ್ಷ ಎ.ಆರ್.ಅಶೋಕ್ ಆರೋಪಿಸಿದರು.



ಪಟ್ಟಣದ ಪುರಸಭೆ ವೇಲಾಪುರಿ ಸಭಾಂಗಣದಲ್ಲಿ ಪ್ರಭಾರ ಅಧ್ಯಕ್ಷೆ ಉಷಾ ಸತೀಶ್ ಅವರ ಅಧ್ಯಕ್ಷತೆಯಲ್ಲಿ ನಡೆದ ತುರ್ತು ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ಸರ್ವೆ ನಂ. 158 ಮತ್ತು 19 ರಲ್ಲಿ ಆಶ್ರಯ ನಿವಾಸಿಗಳಿಗಾಗಿ ಜಾಗ ನಿಗದಿಪಡಿಸಲಾಗಿದೆ. ಅಧಿಕಾರಿಗಳು ಬಡವರ ಪರ ಕೆಲಸ ಮಾಡಬೇಕು. ಯಾರು ಎಷ್ಟೇ ಪ್ರಭಾವ ಬೀರಿದರೂ ಬಡವರಿಗೆ ಅನ್ಯಾಯವಾಗಬಾರದು ಎಂದರು.

ಚನ್ನಕೇಶವ ದೇಗುಲ ಐತಿಹಾಸಿಕ ಸ್ಥಳವಾಗಿದ್ದು ಸುತ್ತ 100 ಮೀಟರ್ ವ್ಯಾಪ್ತಿಯಲ್ಲಿ ಕಟ್ಟಡಗಳ ನಿರ್ಮಾಣ, ರಿಪೇರಿ ಕೆಲಸ ಮಾಡಬಾರದೆಂಬ ಆದೇಶವಿದ್ದರೂ ದೇವಸ್ಥಾನ ರಸ್ತೆಯಲ್ಲಿ ಹಳೆಯ ಕಟ್ಟಡ ಅರ್ಧ ಭಾಗದಲ್ಲಿ ಧ್ವಂಸಗೊಂಡು ಪ್ರವಾಸಿಗರಿಗೆ ಕಿರಿಕಿರಿ ಉಂಟು ಮಾಡುತ್ತಿದೆ. ಪುರಸಭೆಯಿಂದ ಅನುಮತಿ ನೀಡದೆ ಇದ್ದರೂ ಹೇಗೆ ಕಟ್ಟಡ ದುರಸ್ತಿ ಕಾರ್ಯ ನಡೆಯುತ್ತಿದೆ. ಯಾರ ಕುಮ್ಮಕ್ಕಿನಿಂದ ಕೆಲಸ ಮಾಡುತ್ತಿದ್ದೀರಾ ಎಂದು ಮುಖ್ಯಾಧಿಕಾರಿಯನ್ನು ಪ್ರಶ್ನಿಸಿದರು.

ಉಷಾ ಸತೀಶ್ ಅವರು ಮಾತನಾಡಿ, 20 ವರ್ಷಗಳ ಹಳೆಯ ಕಟ್ಟವಾಗಿರುವುದರಿಂದ ಅನಾಹುತ ಸಂಭವಿಸಬಾರದೆಂಬ ಮುನ್ನೆಚ್ಚರಿಕೆಯಿಂದ ಕೆಲಸ ಮಾಡಲಾಗುತ್ತಿದೆ.

ಅಭಿವೃದ್ಧಿ ಕಾಮಗಾರಿಗೆ ಯಾರ ಕುಮ್ಮಕ್ಕು ಬೇಕಾಗಿಲ್ಲ. ಸದ್ಯಕ್ಕೆ ಟಾರ್ಪಾಲ್ ಮುಚ್ಚುವ ವ್ಯವಸ್ಥೆ ಮಾಡಲಾಗುವುದೆಂದರು.

ಸದಸ್ಯೆ ತೀರ್ಥಕುಮಾರಿ ವೆಂಕಟೇಶ್ ಮಾತನಾಡಿ, ತುರ್ತು ಸಭೆಯಲ್ಲಿ ನಿಗದಿತ ವಿಚಾರಗಳ ಚರ್ಚೆಯಾಗಬೇಕು ಎಂದಾಗ ಆಕ್ಷೇಪ ವ್ಯಕ್ತಪಡಿಸಿದ ಸದಸ್ಯ ಅಶೋಕ್ ಅವರು, ಎಲ್ಲಾ ವಿಚಾರ ಮಾತನಾಡುವ ಹಕ್ಕು ಪುರಸಭಾ ಸದಸ್ಯರಿಗೆ ಇದೆ. ಊರಿನ ಅಭಿವೃದ್ಧಿ ಬಗ್ಗೆ ಮಾತ್ರ ಚರ್ಚೆ ಮಾಡುತ್ತಿದ್ದೇವೆ ಎಂದರು.

ಪುರಸಭೆ ಮುಖ್ಯಾಧಿಕಾರಿ ಬಸವರಾಜು ಶಿಗ್ಗಾವಿ ಮಾತನಾಡಿ, ಕಳೆದ ಸಾಲಿಗಿಂತ ಈ ಬಾರಿ ಕಡಿಮೆ ಮೊತ್ತಕ್ಕೆ ಸುಂಕ ಬಿಡ್ ಆಗಿರುವುದರಿಂದ ಪುರಸಭೆ ಬೊಕ್ಕಸಕ್ಕೆ ಆದಾಯ ಕುಸಿತ ಉಂಟಾಗಿದೆ.

ಅದಕ್ಕೆ ಸದಸ್ಯರ ಅನುಮತಿ ಅಗತ್ಯವಿದೆ ಎಂದು ಪ್ರಸ್ತಾಪಿಸಿದರು.

# ಕಲ್ಲು ಗಣಿಗಾರಿಕೆ ಸ್ಥಗಿತಕ್ಕೆ ಆಗ್ರಹಿಸಿ ಅನಿರ್ದಿಷ್ಟಾವಧಿ ಧರಣಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅರಕಲಗೂಡು ತಾಲ್ಲೂಕಿನ ಮಲ್ಲಿಪಟ್ಟಣ ಹೋಬಳಿ ಅರಸಿಕಟ್ಟೆ ಗ್ರಾಮದ ನೆಹರು ನಗರ ಸಮೀಪ ನಡೆಯುತ್ತಿರುವ ಕಲ್ಲು ಗಣಿಗಾರಿಕೆ ಸ್ಥಗಿತಗೊಳಿಸಬೇಕೆಂದು ಆಗ್ರಹಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ಅನಿರ್ದಿಷ್ಟಾವಧಿ ಧರಣಿ ಆರಂಭಿಸಲಾಗಿದೆ.

ಅರಕಲಗೂಡು ಕಾವಲು ಸಮಿತಿ ಅಧ್ಯಕ್ಷ ವಿಜಯಕುಮಾರ್ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಪ್ರತಿಭಟನೆಯಲ್ಲಿ ನೆಹರು ನಗರ ಸರ್ಕಾರಿ ಶಾಲಾ ಮಕ್ಕಳು ಭಾಗವಹಿಸಿದ್ದಾರೆ.

ಗ್ರಾಮದ ಸರ್ವೆ ನಂ. 116ರಲ್ಲಿ ಕಲ್ಲು ಗಣಿಗಾರಿಕೆ ನಡೆಯುತ್ತಿದ್ದು ಅದರಿಂದ ಭಾರೀ ಸಮಸ್ಯೆಯಾಗುತ್ತಿದೆ. ಶಾಲೆ ಪಕ್ಕದಲ್ಲೇ ಇರುವುದರಿಂದ ವಿಪರೀತ ಧೂಳಿನಿಂದ ಮಕ್ಕಳು ಶಾಲೆಗೆ ಹೋಗಲು ಆಗುತ್ತಿಲ್ಲ. ಕಲ್ಲು ಬಂಡೆ ಬ್ಲಾಸ್ಟಿಂಗ್‌ನಿಂದ ಜೋರು ಶಬ್ದ ಕೇಳಿಸುತ್ತಿದೆ. ಕಲ್ಲು ಪುಡಿಗಳು ಅಕ್ಕಪಕ್ಕದ ಜಮೀನಿಗೆ ಬಿದ್ದು ವ್ಯವಸಾಯಕ್ಕೆ ತೊಂದರೆಯಾಗುತ್ತಿದೆ. ಅಂತರ್ಜಲ ಮಟ್ಟವು ಕುಸಿದಿದೆ ಎಂದು ಪ್ರತಿಭಟನಾಕಾರರು ಹೇಳಿದರು.

ಗಣಿಗಾರಿಕೆ ನಿಲ್ಲಿಸುವಂತೆ ಹಲವು ತಿಂಗಳಿಂದ ಆಗ್ರಹಿಸಿದರೂ ಪ್ರಯೋಜನವಾಗಿಲ್ಲ. ಶಾಸಕ ಎ.ಮಂಜು, ತಹಶೀಲ್ದಾರ್ ನೇತೃತ್ವದಲ್ಲಿ ಸಭೆ ನಡೆಸಿದರೂ ಪ್ರಯೋಜನವಾಗಿಲ್ಲ. ಕಲ್ಲು ಗಣಿಗಾರಿಕೆ ಸ್ಥಗಿತಗೊಳಿಸುವವರೆಗೂ ಹೋರಾಟದಿಂದ ಹಿಂದೆ ಸರಿಯುವುದಿಲ್ಲ. ಮಕ್ಕಳ ಶೈಕ್ಷಣಿಕ ಭವಿಷ್ಯದ ದೃಷ್ಟಿಯಿಂದ ಜಿಲ್ಲಾಡಳಿತ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

# ಎಸ್ಎಸ್ಎಲ್‌ಸಿ ಪರೀಕ್ಷಾ ಕೇಂದ್ರಕ್ಕೆ ಜಿಲ್ಲಾಧಿಕಾರಿ ಭೇಟಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ವಾಣಿ ವಿಲಾಸ ಬಾಲಕಿಯರ ಸರ್ಕಾರಿ ಪ್ರೌಢ ಶಾಲೆಯಲ್ಲಿರುವ ಪರೀಕ್ಷಾ ಕೇಂದ್ರಕ್ಕೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೋಮವಾರ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಮಾತುಕತೆ ನಡೆಸಿದರು.

ಈ ವೇಳೆ ಮಾತನಾಡಿದ ಅವರು, ಜಿಲ್ಲಾದ್ಯಂತ ಶಾಂತಿಯುತವಾಗಿ ಪರೀಕ್ಷೆ ನಡೆಯುತ್ತಿದೆ. ಸೂಕ್ತ ವ್ಯವಸ್ಥೆಯನ್ನು ಮಾಡಲಾಗಿದೆ. ವಿದ್ಯಾರ್ಥಿಗಳಲ್ಲಿ ಆರೋಗ್ಯದ ಸಮಸ್ಯೆ ಉಂಟಾದಲ್ಲಿ ತುರ್ತು ಚಿಕಿತ್ಸಾ ಉಪಕರಣದೊಂದಿಗೆ ಆರೋಗ್ಯ ಇಲಾಖೆಯಿಂದ ಸಿಬ್ಬಂದಿ ನಿಯೋಜಿಸಲಾಗಿದೆ ಎಂದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗು ಶಿಕ್ಷಣ ಇಲಾಖೆಯಿಂದ ವಿದ್ಯಾರ್ಥಿಗಳು ಕೈಗೊಳ್ಳಬೇಕಾದ ಸಿದ್ಧತೆಗಳ ಬಗ್ಗೆ ಪರೀಕ್ಷೆಯನ್ನು ಎದುರಿಸುವ ಬಗ್ಗೆ ಕಾರ್ಯಾಗಾರ ಏರ್ಪಡಿಸಲಾಗಿದೆ. ವಿದ್ಯಾರ್ಥಿಗಳಿಗೆ ಯಾವುದೇ ಗೊಂದಲವಾಗದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಸಹಾಯವಾಣಿ ತೆರೆಯಲಾಗಿದೆ ಎಂದು ತಿಳಿಸಿದರು.

ಈ ಬಾರಿ ಫಲಿತಾಂಶದಲ್ಲಿ ಜಿಲ್ಲೆಯು ರಾಜ್ಯಕ್ಕೆ ಮೊದಲ ಸ್ಥಾನ ಪಡೆಯುವ ನೀರಿಕ್ಷೆಯಿದೆ. ಪೂರ್ವ ಭಾವಿ ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದಿದೆ. ಪರೀಕ್ಷೆ ಬರೆಯುವ ಎಲ್ಲಾ ವಿದ್ಯಾರ್ಥಿಗಳು ಉತ್ತೀರ್ಣರಾಗಬೇಕು. ಯಾವುದೇ ವಿದ್ಯಾರ್ಥಿಯು ಸಹ ಅನುತ್ತೀರ್ಣರಾಗಬಾರದು, ಅದರಿಂದ ಮಕ್ಕಳು ಪಿಡುಗುಗಳಿಗೆ ಒಳಗಾಗುವ ಸಾಧ್ಯತೆಗಳಿವೆ ಎಂದರು.

# ಇತಿಹಾಸದಲ್ಲಿ ಈ ದಿನ

## ಮಾರ್ಚ್-25

1807: ಬ್ರಿಟನ್‌ನಲ್ಲಿ ದಾಸ್ಯ ವ್ಯಾಪಾರ ನಿಷೇಧ ಕಾಯ್ದೆ ಅಂಗೀಕರಿಸಲಾಯಿತು.

1911: ನ್ಯೂಯಾರ್ಕ್‌ನ ಟ್ರೈಆಂಗಲ್ ಶರ್ಟ್‌ವೇಸ್ಟ್ ಕಾರ್ಖಾನೆಯಲ್ಲಿ ಭೀಕರ ಅಗ್ನಿ ಅವಘಡ ಸಂಭವಿಸಿ 140ಕ್ಕೂ ಹೆಚ್ಚು ಕಾರ್ಮಿಕರು ಸಾವನ್ನಪ್ಪಿದರು.

1957: ಯುರೋಪಿಯನ್ ಆರ್ಥಿಕ ಸಮುದಾಯ ಸ್ಥಾಪನೆಯಾಗಿ ಯುರೋಪಿಯನ್ ಯೂನಿಯನ್‌ಗೆ ಬುನಾದಿ ಬಿದ್ದಿತು.

1971: ಬಾಂಗ್ಲಾದೇಶ ಸ್ವಾತಂತ್ರ್ಯ ಹೋರಾಟ ಆರಂಭವಾಯಿತು.

2020: ಭಾರತದಲ್ಲಿ ಕೋವಿಡ್-19 ನಿಯಂತ್ರಣಕ್ಕಾಗಿ ದೇಶವ್ಯಾಪಿ ಲಾಕ್‌ಡೌನ್ ಘೋಷಿಸಲಾಯಿತು.

**ಜನನ**

1881: ಪ್ರಸಿದ್ಧ ಹಂಗೇರಿಯನ್ ಸಂಗೀತಗಾರ ಬೇಲಾ ಬಾರ್ಟೋಕ್

1942: ಅಮೇರಿಕಾದ ಪ್ರಸಿದ್ಧ ಗಾಯಕಿ ಅರೇಥಾ ಫ್ರಾಂಕ್ಲಿನ್

**ಮರಣ**

1918: ಫ್ರೆಂಚ್ ಸಂಗೀತಗಾರ ಕ್ಲಾಡ್ ಡೆಬ್ಯೂಸಿ

# ಮಹಿಳಾ ಸಿಬ್ಬಂದಿ ಜೊತೆ ಅಸಭ್ಯ ವರ್ತನೆ: ದಂಡ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕಡತ ಪರಿಶೀಲನೆ ನೆಪದಲ್ಲಿ ಮಹಿಳಾ ಸಿಬ್ಬಂದಿ ಜೊತೆ ಅಸಭ್ಯವಾಗಿ ವರ್ತಿಸಿದ್ದ ಕಂದಾಯ ನಿರೀಕ್ಷಕನಿಗೆ 20 ಸಾವಿರ ರೂ. ದಂಡ ವಿಧಿಸಿ ಜಿಲ್ಲಾ ನ್ಯಾಯಾಲಯ ಆದೇಶಿಸಿದೆ.

ಕಟ್ಟಾಯ ನಾಡ ಕಚೇರಿ ಕಂದಾಯ ನಿರೀಕ್ಷಕ ಬಿ.ಮೋಹನ್ ಕುಮಾರ್ ಎಂಬುವವರಿಗೆ ದಂಡ ವಿಧಿಸಲಾಗಿದೆ. 2016ರ ಡಿ. 16ರಂದು ಕಟ್ಟಾಯ ನಾಡ ಕಚೇರಿಯಲ್ಲಿ ಕೆಲಸ ಮಾಡುತ್ತಿದ್ದ ಮಹಿಳಾ ಗ್ರಾಮ ಲೆಕ್ಕಾಧಿಕಾರಿಯನ್ನು ಕಡತ ಪರಿಶೀಲನೆ ನೆಪದಲ್ಲಿ ಕೊಠಡಿಗೆ ಕರೆಸಿಕೊಂಡಿದ್ದ ಮೋಹನ್ ಕುಮಾರ್ ಅಸಭ್ಯವಾಗಿ ವರ್ತಿಸಿ, ಲೈಂಗಿಕ ಕಿರುಕುಳ ನೀಡಿದ್ದ ಎಂದು ಗೊರೂರು ಠಾಣೆಯಲ್ಲಿ ಎಫ್ಐಆರ್ ದಾಖಲಿಸಲಾಗಿತ್ತು.

ಪ್ರಕರಣ ದಾಖಲಿಸಿಕೊಂಡಿದ್ದ ಪೊಲೀಸರು ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಬಿ.ಎಂ.ಶೈಲಾ ಅವರು, ಸಾಕ್ಷಿದಾರರ ಹೇಳಿಕೆ ಪರಿಗಣಿಸಿ ಬಿ.ಮೋಹನ್ ಕುಮಾರ್ ಅವರಿಂದ 25 ಸಾವಿರ ರೂ. ಮೌಲ್ಯದ ಮುಚ್ಚಳಿಕೆ ಬಾಂಡ್ ಪಡೆದು 2 ವರ್ಷಗಳ ಕಾಲ ಸನ್ನಡತೆ ಹಾಗು ಶಾಂತಿ ಕಾಪಾಡುವಂತೆ ಎಚ್ಚರಿಕೆ ನೀಡಿ, 20 ಸಾವಿರ ರೂ. ದಂಡವನ್ನು ಸಂತ್ರಸ್ತ ಮಹಿಳೆಗೆ ನೀಡುವಂತೆ ಆದೇಶಿಸಿದ್ದಾರೆ. ಸರ್ಕಾರದ ಪರವಾಗಿ ಹೆಚ್.ಕೆ.ಸುರೇಶ್ ವಾದ ಮಂಡಿಸಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248